**CC 1266/2018**
**CW 1 – PW 1**

3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಚನ್ನರಾಯಪಟ್ಟಣ

**CC 1266/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ನಂಜಮ್ಮ | **C.W –1** |
| ತಂದೆಯ ಹೆಸರು | ಃ | ಗಿರಿಯಪ್ಪ | **P.W – 1** |
| ವಯಸ್ಸು | ಃ | - | |
| ಉದ್ಯೋಗ | ಃ | ಗೃಹಿಣಿ | **ಪ್ರಮಾಣ ವಚನ ಬೋಧಿಸಲಾಯಿತು.** |
| ವಾಸ | ಃ | ದೊಡ್ಡೇರಿಕಾವಲು | ದಿನಾಂಕಃ **04.08.2023** |

---

ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದ

ಆರೋಪಿ ನನ್ನ ಸೊಸೆ. ಚಾ ಸಾ 2 ಮತ್ತು 4 ನನ್ನ ಸೊಸೆ, ಚಾ ಸಾ 3 ನನ್ನ ಮಗಳು. ಚಾ ಸಾ 5 ಮತ್ತು 6 ರವರ ಪರಿಚಯವಿದೆ.

ಸುಮಾರು 5 ವರ್ಷಗಳ ಹಿಂದೆ ಬೆಳಿಗ್ಗೆ 08.00 ಗಂಟೆ ಸಮಯದಲ್ಲಿ ನಾನು ನನ್ನ ಮನೆಯ ಹತ್ತಿರವಿದ್ದಾಗ ಜಮೀನಿನ ವಿಷಯವಾಗಿ ಚಾ ಸಾ 2 ರವರ ಜೊತೆ ಆರೋಪಿಯು ಜಗಳ ಆಡುತ್ತಾಯಿದ್ದರು. ಆ ಸಮಯದಲ್ಲಿ ನಾನು ಯಾಕೆ ಬೈಯುತ್ತಿದ್ದೀಯಾ ಎಂದು ಆರೋಪಿಯನ್ನು ಪ್ರಶ್ನಿಸಿದಾಗ ನನ್ನ ಮುಂದಲೆಯನ್ನು ಎಳೆದಾಡಿ ನನ್ನ ಕಿತಿಯನ್ನು ಎಳೆದಿರುತ್ತಾರೆ. ಆರೋಪಿಯು ನನಗೆ ಕಾಲಿನಿಂದ ಒದ್ದಿರುತ್ತಾರೆ. ಆ ಸಮಯದಲ್ಲಿ ಚಾ ಸಾ 3 ಮತ್ತು 4 ರವರು ಬಂದು ಜಗಳ ಬಿಡಿಸಿರುತ್ತಾರೆ. ನಂತರ ಚಾ ಸಾ 3 ಮತ್ತು 4 ರವರು ನನ್ನನ್ನು ಕರೆದುಕೊಂಡು ಹೋಗಿ ಚನ್ನರಾಯಪಟ್ಟಣದ ಆಸ್ಪತ್ರೆಗೆ ದಾಖಲಿಸಿರುತ್ತಾರೆ. ಪೋಲೀಸರು ಆಸ್ಪತ್ರೆಗೆ ಬಂದು ನನ್ನ ಹೇಳಿಕೆ ಪಡೆದುಕೊಂಡಿರುತ್ತಾರೆ. ಸದರಿ ಹೇಳಿಕೆಯನ್ನು ಸಾಕ್ಷಿಗೆ ತೋರಿಸಲಾಗಿ ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿ ಪಿ 1 ಎಂದು ಗುರುತಿಸಲಾಯಿತು.

ಸಾಕ್ಷಿಗೆ ಕೃತ್ಯಸ್ಥಳ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿ ಪಿ 2 ಎಂದು ಗುರುತಿಸಲಾಯಿತು. ನಾನು ಆಸ್ಪತ್ರೆಯಿಂದ ಮನೆಗೆ ಹೋದ ನಂತರ ಪೋಲೀಸರು ಘಟನಾ ಸ್ಥಳಕ್ಕೆ ಬಂದಿರುತ್ತಾರೆ. ಸ್ಥಳವನ್ನು ಚಾ ಸಾ 6 ರವರು ತೋರಿಸಿರುತ್ತಾರೆ. ಪೋಲೀಸರು ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗೆ ನಿ ಪಿ 2 ನ್ನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿ ಪಿ 2 ಕ್ಕೆ ಯಾರು ಯಾರು ಸಹಿ

ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

***(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸರ್ಕಾರಿ ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ** ಮಾನ್ಯ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ 07.08.2018ರಂದು ನಾನು ಚಾ ಸಾ 2ರವರ ಮನೆಯಲ್ಲಿದ್ದಾಗ ಗಲಾಟೆ ನಡೆಯಿತು ಎಂದರೆ ಸರಿ. ಆ ಸಂದರ್ಭದಲ್ಲಿ ಆರೋಪಿಯು ಬಂದು ನ್ಯಾಯಾಲಯಕ್ಕೆ ಕೇಸು ಹಾಕುತ್ತೀರಾ ಎಂದು ಜಗಳ ಮಾಡಿ ನನ್ನನ್ನು ಅಡ್ಡಗಟ್ಟಿ ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ದಿನಾಂಕ 08.08.2018 ರಂದು ಪೋಲೀಸರು ಸ್ಥಳಕ್ಕೆ ಬಂದು ಮಹಜರ್ ನಡೆಸಿರುತ್ತಾರೆ ಎಂದರೆ ನನಗೆ ದಿನಾಂಕ ನೆನಪಿಲ್ಲ. ಸ್ಥಳವನ್ನು ಪೋಲೀಸರಿಗೆ ನಾನೇ ತೋರಿಸಿರುತ್ತೇನೆ ಎಂದರೆ ಸರಿ. ನಿ ಪಿ 2ಕ್ಕೆ ನನ್ನ ಜೊತೆ ಚಾ ಸಾ 5 ಮತ್ತು 6ರವರು ಸಹಿ ಹಾಕಿರುತ್ತಾರೆ ಎಂದರೆ ಸರಿ. ಆ ಸಮಯದಲ್ಲಿ ಮಧ್ಯಾಹ್ನ 03.30–04.00 ಗಂಟೆ ಸಮಯವಾಗಿತ್ತು ಎಂದರೆ ಸರಿ. ನನಗೆ ಎಲ್ಲಾ ವಿಚಾರಗಳು ತಿಳಿದಿದ್ದು ಈಗ ಸಮಯ ಮತ್ತು ದಿನಾಂಕವನ್ನು ಮರೆತಿರುತ್ತೇನೆ ಎಂದರೆ ಸರಿ.

**ಪಾಟೀ ಸವಾಲು** – ಶ್ರೀ ಕೆ ಜೆ ಡಿ ಆರೋಪಿ ಪರ ವಕೀಲರಿಂದ

ನನ್ನ ಮಗ ನಾಗರಾಜು ಅವರು ನನ್ನ ವಿರುದ್ಧ ಹಿಸ್ಸಾ ಕೋರಿ ದಾವೆ ಸಲ್ಲಿಸಿರುತ್ತಾನೆ ಎಂದರೆ ಸರಿ. ನಾನು ಹಾಸನ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿರುತ್ತೇನೆ ಎಂದರೆ ಸರಿಯಲ್ಲ. ನನಗೆ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿ ಅಭ್ಯಾಸವಿದೆ ಎಂದರೆ ಸರಿಯಲ್ಲ. ಆರೋಪಿ ಮತ್ತು ಆರೋಪಿಯ ಗಂಡ ಬೇರೆ ವಾಸವಾಗಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿ ಮತ್ತು ಆರೋಪಿಯ ಗಂಡ ಬೇರೆ ಅಡುಗೆ ಮಾಡಿಕೊಂಡಿದ್ದಾರೆ ಎಂದರೆ ಸರಿ. ನಿ ಪಿ 1 ಮತ್ತು 2ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಆರೋಪಿಗೆ ಹಲ್ಲೆ ಮಾಡಿದ್ದರಿಂದ ಆರೋಪಿಯು ನನ್ನ ವಿರುದ್ಧ ಪ್ರಕರಣವನ್ನು ದಾಖಲಿಸಿ

**CC 1266/2018**
**CW 1 – PW 1**

ಸದರಿ ಪ್ರಕರಣವು ಇದೇ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿಯಿರುತ್ತದೆ ಎಂದರೆ ಸರಿ. ನಾನು ಮತ್ತು ನನ್ನ ಮಗಳು ನನ್ನ ಸೊಸೆ ಆರೋಪಿಗೆ ಹಲ್ಲೆ ಮಾಡಿ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ. ನಾನು ನನ್ನ ಮಗ ನನ್ನ ವಿರುದ್ಧ ಹಿಸ್ಸಾ ಕೋರಿ ದಾವೆಯನ್ನು ಸಲ್ಲಿಸಿದ್ದರಿಂದ ನಾನು ದುರುದ್ದೇಶದಿಂದ ಆರೋಪಿಯ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ .

**ಮರುವಿಚಾರಣೆ ಇಲ್ಲ .**

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಸಹಿ/–

3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.ಚನ್ನರಾಯಪಟ್ಟಣ